(ಇಂದು ದಿನಾಂಕ:06-08-2026 ರಂದು ಸಾಕ್ಷಿದಾರರನ್ನು ಕರೆಯಿಸಲಾಯಿತು, ಪ್ರಮಾಣ ವಚನ ಬೋಧಿಸಲಾಯಿತು)

**<u>ಮುಖ್ಯ ವಿಚಾರಣೆ: ಎದುರುದಾರರ ನಂ.3 ಶ್ರೀ ಪಿ ಎಚ್ ಎಮ್ ರವರ ಪರ ವಕೀಲರಿಂದ :-</u>**

ಮುಖ್ಯ ವಿಚಾರಣೆ ಪ್ರಮಾಣ ಪತ್ರ ಸಲ್ಲಿಸಿದ್ದೇನೆ. ಪ್ರಮಾಣ ಪತ್ರದಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ.

ನಾನು ದಾಖಲೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಈಗ ನೋಡುತ್ತಿದ್ದೇನೆ. ಸಾಕ್ಷಿಯು ಕೆಳಕಂಡ ದಾಖಲಾತಿಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು ಈ ಕೆಳಕಂಡಂತೆ ನಿಶಾನೆಯಾಗಿ ಗುರುತಿಸಲಾಯಿತು.

| | |
|---|---|
| ನಿ.ಆರ್.1 | ಅಧಿಕಾರ ಪತ್ರ |
| ನಿ.ಆರ್.2 | ವಿಮಾ ಪಾಲಸಿ |

**<u>ಪಾಟೀ ಸವಾಲುಃ ಅರ್ಜಿದಾರ ಪರ ಶ್ರೀ ಎಸ್ ಡಿ ವಕೀಲರಿಂದ</u>**

1. ಲಾರಿ ಚಾಲಕನಿಗೆ ಚಾಲನಾ ಪರವಾನಿಗೆ ಇಲ್ಲ ಅಂತಾ ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಲಾರಿ ಚಾಲಕನ ತಪ್ಪಿನಿಂದಲೂ ಕೂಡಾ ಅಪಘಾತವಾಗಿದೆ ಅಂತಾ ತನಿಖಾಧಿಕಾರಿಗಳು ದೋ.ಪ. ಸಲ್ಲಿಸಿದ್ದಾರೆ ಎಂದರೆ ಸರಿಯಲ್ಲ. ಪರಿಹಾರ ಕೊಡಲು ನಮ್ಮ ಕಂಪನಿಯವರು ಬಾದ್ಯಸ್ಥರು ಎಂದರೆ ಸರಿಯಲ್ಲ. ಅರ್ಜಿದಾರರ ವಿರುದ್ದ ದೋ.ಪ. ದಲ್ಲಿ ಯಾವುದೇ ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ಸುಳ್ಳು ಅಂಶಗಳನ್ನು ಬರೆಸಿರುತ್ತೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯನ್ನು ವಿಚಾರಿಸಿ ನಂತರ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ. ಸರಿ ಇದೆ,

ಸಹಿ/-
ಹಿರಿಯ ಸಿವಿಲ್ ನ್ಯಾಯಾಧೀಶರು,
ಸಿಂಧನೂರು